# ಕರ್ನಾಟಕ ಸರ್ಕಾರ
# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ
# ದಿನಾಂಕ: 14-12-2017

## _ಅಭಿವೃದ್ಧಿಯಲ್ಲಿ ರಾಜಕೀಯ ಭೇದ, ತಾರತಮ್ಯ ಮಾಡಿಲ್ಲ – ಮುಖ್ಯಮಂತ್ರಿ ಸಿದ್ದರಾಮಯ್ಯ



ಕೊಪ್ಪಳ ಡಿ.14: ಕಳೆದ ನಾಲ್ಕೂವರೆ ವರ್ಷಗಳ ಅವಧಿಯಲ್ಲಿ ರಾಜ್ಯದ ಎಲ್ಲ ಭಾಗಗಳಲ್ಲಿ ಯಾವುದೇ ಪಕ್ಷಬೇಧ ,ಪ್ರಾದೇಶಿಕತೆಯ ತಾರತಮ್ಯ ಮಾಡದೇ ಸಮಾನ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗಿದೆ. ನಮ್ಮ ಪ್ರಣಾಳಿಕೆಯಲ್ಲಿ ನೀಡಿದ್ದ ಎಲ್ಲಾ ಭರವಸೆಗಳನ್ನು ಈಡೇರಿಸಿ ನುಡಿದಂತೆ ನಡೆದಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿಂದು ಸುಮಾರು 235 ಕೋಟಿ ರೂಪಾಯಿಗಳ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸುವ ಸಾಧನಾ ಸಂಭ್ರಮ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯುಚ್ಛಕ್ತಿ ಬಿಲ್ ಪಾವತಿಸದ ಬಡವರ ಮನೆಗಳ ಹಾಗೂ ನೀರಾವರಿ ಪಂಪಸೆಟ್ ಗಳ ಸಂಪರ್ಕ ಕಡಿತಗೊಳಿಸಲಾಗಿತ್ತು. ಅಧಿಕಾರಕ್ಕೆ ಬಂದ ಕೂಡಲೇ ಅದನ್ನು ಮನ್ನಾ ಮಾಡಿ ಸಂಪರ್ಕ ಕಲ್ಪಿಸಲಾಯಿತು.ವಿವಿಧ ಅಭಿವೃದ್ಧಿ ನಿಗಮ ಗಳಲ್ಲಿ ಬಾಕಿ ಇದ್ದ ಬಡವರ ಸಾಲ ಮನ್ನಾ ಮಾಡಿ ಋಣಮುಕ್ತಗೊಳಿಸಲಾಯಿತು.

ಕಳೆದ ನಾಲ್ಕೂವರೆ ವರ್ಷಗಳಲ್ಲಿ ಯಾವುದೇ ಭ್ರಷ್ಟಾಚಾರ, ಹಗರಣಕ್ಕೆ ಆಸ್ಪದ ನೀಡದೇ ದಕ್ಷ ,ಸಮರ್ಥ ಆಡಳಿತವನ್ನು ನೀಡಿದ್ದೇವೆ. ಕೋಮುಭಾವನೆ ಕೆರಳಿಸಿ, ಶಾಂತಿ ಕದಡಿ ರಾಜಕೀಯ ಮಾಡಬಾರದು. ಸಂವಿಧಾನ,ಸಂಸದೀಯ ಭಾಷೆಯನ್ನು ಎಲ್ಲ ರಾಜಕೀಯ ಪಕ್ಷಗಳು ಅಳವಡಿಸಿಕೊಳ್ಳಬೇಕು.

ಸಹಕಾರ ಬ್ಯಾಂಕುಗಳಲ್ಲಿ ನ  ರೈತರವ50 ಸಾವಿರ ರೂಪಾಯಿವರೆಗಿನ ಒಟ್ಟು 10 ಸಾವಿರ ಕೋಟಿ ರೂ. ಸಾಲ ಮನ್ನಾ ಮಾಡಿದ್ದೇವೆ.

ಅನ್ನಭಾಗ್ಯ, ಕ್ಷೀರಭಾಗ್ಯ, ಕ್ಷೀರಧಾರೆ, ವಿದ್ಯಾಸಿರಿ ಯೋಜನೆಗಳ ಮೂಲಕ ಹಸಿವು ,ಅಪೌಷ್ಟಿಕತೆ ಮುಕ್ತ ಕರ್ನಾಟಕ ನಿರ್ಮಿಸಲು ಧೃಡ ಹೆಜ್ಜೆಗಳನ್ನು ಇಡಲಾಗಿದೆ.ಹಾಸ್ಟೇಲ್ ವಂಚಿತ ಮಕ್ಕಳಿಗೆ ವಿದ್ಯಾಸಿರಿ ಯೋಜನೆ ವರದಾನವಾಗಿದೆ.

ಅಭಿವೃದ್ಧಿ ವಿಚಾರದಲ್ಲಿ ಸಮಾಜದಲ್ಲಿ ಎಲ್ಲರನ್ನೂ ಸಮಾನವಾಗಿ ಕಾಣಬೇಕು. ಕೆಲ ಧರ್ಮಗಳನ್ನು ಹೊರಗಿಡುವ ಹುನ್ನಾರ ಸರಿಯಲ್ಲ.

ಕಳೆದ ನಾಲ್ಕೂವರೆ ವರ್ಷಗಳಲ್ಲಿ 14 ಲಕ್ಷ ಉದ್ಯೋಗ ಸೃಜನೆ ಮಾಡಲಾಗಿದೆ.ಬಂಡವಾಳ ಹೂಡಿಕೆಯಲ್ಲಿ 11 ನೇ ಸ್ಥಾನದಲ್ಲಿದ್ದ ಕರ್ನಾಟಕ ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ದೇಶದಲ್ಲಿಯೇ ಮೊದಲ ಸ್ಥಾನದಲ್ಲಿದೆ.

ಪ.ಜಾ. ಹಾಗೂ ಪ.ಪಂ.ಗಳ ಜನರ ವಿಕಾಸಕ್ಕಾಗಿ ಮೀಸಲಿಡಲಾದ ಹಣ ಕಡ್ಡಾಯವಾಗಿ ಬಳಸಲು ಎಸ್.ಸಿ.ಪಿ ಮತ್ತು .ಟಿ ಎಸ್.ಪಿ .ಕಾಯ್ದೆ ಜಾರಿ ಮಾಡಿದ್ದು,ಗುತ್ತಿಗೆ ಕಾಮಗಾರಿಗಳಲ್ಲಿ ಮೀಸಲಾತಿ ನೀತಿ ತಂದುದು. ತಾಂಡಾ,ಗಿರಿಜನ ಹಾಡಿ,ಗೊಲ್ಲರ ಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿಸಿ, ವಾಸಿಸುವನೇ ಒಡೆಯ ಕಾಯ್ದೆಗಳನ್ನು ಅನುಷ್ಠಾನ ಕ್ಕೆ ತಂದುದು ಐತಿಹಾಸಿಕ ನಿರ್ಣಯಗಳಾಗಿವೆ ಎಂದರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿದ ಗಂಗಾವತಿ ತಾಲೂಕಿನ ಪ್ರಗತಿ ಮಾಹಿತಿ ಕಿರುಪುಸ್ತಕವನ್ನು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದರು.

ಉನ್ನತ ಶಿಕ್ಷಣ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಮಾತನಾಡಿ,ಅಭಿವೃದ್ಧಿ ಹಾಗೂ ಸರ್ವರಿಗೂ ಸಮಪಾಲು ಸಮಬಾಳು ಎಂಬ ವಿಷಯದಲ್ಲಿ ನಂಬಿಕೆ ಇಟ್ಟುಕೊಂಡಿರುವಮುಖ್ಯಮಂತ್ರಿಗಳು ಬಡವರು ಹಾಗೂ ರೈತರ ಹಿತಾಭಿವೃದ್ಧಿಗೆ ಬದ್ಧವಾಗಿದ್ದಾರೆ.ಪ್ರತಿ ವರ್ಷ 5 ಸಾವಿರ ಕೋಟಿ ರೂ.ಗಳನ್ನು ಕೇವಲ ಆಹಾರಧಾನ್ಯದ ಸಬ್ಸಿಡಿಗಾಗಿಯೇ ಖರ್ಚು ಮಾಡುತ್ತಿದೆ.ದೇಶದಲ್ಲಿ ಬೇರೆ ಯಾವ ರಾಜ್ಯಗಳೂ ಇಂತಹ ಕಾರ್ಯಕ್ರಮ ಹಮ್ಮಿಕೊಂಡಿಲ್ಲ.

ಉಚಿತ ಗ್ಯಾಸ್ ಸ್ಟೋವ್ ಹಾಗೂ ಸಿಲಿಂಡರ್ ಒದಗಿಸಲು ಪ್ರತಿ ಬಡಕುಟುಂಬಗಳಿಗೆ 4040 ರೂ ವೆಚ್ಚದಲ್ಲಿ ಮುಖ್ಯಮಂತ್ರಿಗಳ ಅನಿಲ ಭಾಗ್ಯ ಯೋಜನೆಯನ್ನು ಮಾರ್ಚ ಅಂತ್ಯದೊಳಗಾಗಿ ಅನುಷ್ಠಾನ ಮಾಡುತ್ತಿದ್ದೇವೆ. ಮುನಿರಾಬಾದ್ ಮೆಹಬೂಬನಗರ ಹಾಗೂ ಗದಗ ವಾಡಿ ರೇಲ್ವೇ ಯೋಜನೆಗಳಿಗೆ ರಾಜ್ಯಸರಕಾರ ಅರ್ಧ ಪಾಲು ನೀಡಿ ಭೂಮಿಯನ್ನು ಸಹ ಉಚಿತವಾಗಿ ನೀಡಿದೆ.ಮಾರುಕಟ್ಟೆ ದರದಲ್ಲಿ ರೈತರಿಗೆ ಪರಿಹಾರ ನೀಡಿ ಕೃಷ್ಣಾ ಬಿ ಸ್ಕೀಮ್

ಯೋಜನೆ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ .ಇದಕ್ಕೆ ಮುಖ್ಯಮಂತ್ರಿಗಳು 2395 ಕೋಟಿ ರೂ.ಗಳ ಹಣ ನೀಡಲು ತಾತ್ವಿಕವಾಗಿ ಒಪ್ಪಿದ್ದಾರೆ ಎಂದರು.

ಶಾಸಕ ಇಕ್ಬಾಲ್ ಅನ್ಸಾರಿ ಪ್ರಾಸ್ತಾವಿಕವಾಗಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಳೆದ ನಾಲ್ಕೂವರೆ ವರ್ಷಗಳಲ್ಲಿ ಸಾಸಾಕಷ್ಟು ಸ್ಪಂದಿಸಿದ್ದಾರೆ. ತುಂಗಭದ್ರಾ ಎಡದಂಡೆ ನಾಲೆಯ ಎರಡನೇ ಬೆಳೆಗೆ ನೀರೊದಗಿಸುವ ಕಾರ್ಯವನ್ನು ಸರಾಗವಾಗಿ ನಡೆಸಿಕೊಟ್ಟರು.

ಯಾವುದೇ ಜಾತಿ, ವರ್ಗಗಳಿಗೆ ಸೀಮಿತವಾಗದೇ ಎಲ್ಲರಿಗೂ ಸಮಾನವಾಗಿ ಕಂಡು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ಸೌಹಾರ್ದತೆ ,ಕೋಮು ಸಾಮರಸ್ಯ ಕದಡಿ, ಕಲಹ ಸೃಷ್ಟಿಸುವ ಶಕ್ತಿಗಳನ್ನು ನಿಗ್ರಹಿಸುವ ಕಾರ್ಯವನ್ನು ಜಿಲ್ಲೆಯ ಪೊಲೀಸರು, ಜಿಲ್ಲಾಧಿಕಾರಿ ಗಳು ಸಮರ್ಥವಾಗಿ ಶ್ರಮಿಸಿದ್ದಾರೆ. ಕಳೆದ ನಾಲ್ಕೂವರೆ ವರ್ಷಗಳಲ್ಲಿ ಸುಮಾರು 620 ಕೋಟಿ ರೂ.ಗಳ ಅನುದಾನ ಮುಖ್ಯಮಂತ್ರಿಗಳು ನೀಡಿರುವದು ಸಾಮಾನ್ಯ ಸಂಗತಿಯಲ್ಲ. ಈ ಭಾಗದಲ್ಲಿ ನಿರಂತರವಾಗಿ ಆನೆಗೊಂದಿ ಹಾಗೂ ಕನಕಗಿರಿ ಉತ್ಸವಕ್ಕಾಗಿ ಶಾಶ್ವತ ಅನುದಾನ ಮೀಸಲಿಡಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು. ನೇರ ನಡೆ ನುಡಿಗೆ ಹೆಸರಾಗಿರುವ ಮುಖ್ಯಮಂತ್ರಿಗಳ ಮನೋಭಾವ ಮೆಚ್ಚಿ ಅವರೊಂದಿಗೆ ಗುರುರಿಸಿಕೊಂಡಿದ್ದೇನೆ.ಕ್ಷೇತ್ರದ ಅಭಿವೃದ್ಧಿ ನನಗೆ ಮುಖ್ಯ, ಯಾರಿಗೂ ದ್ರೋಹ ಬಗೆದಿಲ್ಲ ಎಂದರು.

ಶಾಸಕರಾದ ಶಿವರಾಜ ತಂಗಡಗಿ, ಕೆ.ರಾಘವೇಂದ್ರ ಹಿಟ್ನಾಳ, ಹಂಪನಗೌಡ ಬಾದರ್ಲಿ, ಜಿ.ಪಂ.ಅಧ್ಯಕ್ಷ ರಾಜಶೇಖರ ಹಿಟ್ನಾಳ,ಜಿಲ್ಲಾಧಿಕಾರಿ ಎಂ.ಕನಗವಲ್ಲಿ, ಜಿ.ಪಂ ಸಿಇಓ ವೆಂಕಟರಾಜ್ ಮತ್ತಿತರರು ಇದ್ದರು.

## ಕೃಷ್ಣಾ ಬಿ. ಸ್ಕೀಂ; ಮೂರನೆ ಹಂತದ ಏತ ನೀರಾವರಿ ಯೋಜನೆಗೆ ಶೀಘ್ರ ಶಂಕುಸ್ಥಾಪನೆ
## ತುಂಗಭದ್ರಾ ಹೆಚ್ಚುವರಿ ನೀರು ಬಿಡುಗಡೆಗೆ ತೆಲಂಗಾಣಕ್ಕೆ ನಿಯೋಗ



ಕೊಪ್ಪಳ ಡಿ. 14 : ಕೊಪ್ಪಳ ಜಿಲ್ಲೆಯ ರೈತರ ನೀರಿನ ಬವಣೆ ತಪ್ಪಿಸಲು 2396 ಕೋಟಿ ರೂ.ವೆಚ್ಚದಲ್ಲಿ ಕೃಷ್ಣಾ ನದಿಯ ಮೂರನೇ ಹಂತದ ನೀರು ಪೂರೈಕೆಗೆ ಜಿಲ್ಲೆಯ ಸಚಿವರ ಹಾಗೂ ಶಾಸಕರ ಆಗ್ರಹದಂತೆ ಶೀಘ್ರ ಏತ ನೀರವರಿ

ಯೋಜನೆಗೆ ಸಂಪುಟ ಸಭೆಯಲ್ಲಿ ಒಪ್ಪಿಗೆ ಪಡೆದು ಆದಷ್ಟು ಬೇಗನೆ ಅದರ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸುವುದಾಗಿ ರಾಜ್ಯದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಭರವಸೆ ನೀಡಿದರು.

ಕನಕಗಿರಿಯ ಎ.ಪಿ.ಎಂ.ಸಿ ಆವರಣದಲ್ಲಿ ಕನಕಗಿರಿ ವಿಧಾನ ಸಭಾ ಕ್ಷೇತ್ರದಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ, ಉದ್ಘಾಟನೆ ನೆರವೇರಿಸಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಹೊರತಂದ ನುಡಿದಂತೆ ನಡೆದಿದ್ದೇವೆ ಸಾಧನಾ ಸಂಭ್ರಮದ ಜಿಲ್ಲಾ ಹಾಗೂ ತಾಲೂಕುಗಳ ಪ್ರಗತಿಮಾಹಿತಿ ಪುಸ್ತಕಗಳನ್ನು ಬಿಡುಗಡೆ ಮಾಡಿ ಕಾರಟಗಿ ಮತ್ತು ಕನಕಗಿರಿ ನೂತನ ತಾಲೂಕುಗಳು ಬರುವ ಜನೇವರಿಯಿಂದ ಕಾರ್ಯ ನಿರ್ವಹಿಸಲಿವೆ ಎಂದು ಘೋಷಿಸಿ ಅವರು ಮಾತನಾಡಿದರು. ಜಿಲ್ಲೆಯ ಈಭಾಗದ ರೈತರ ಎರಡನೆ ಬೆಳೆಗೆ ನೀರು ಇಲ್ಲ ಆದರೆ ತೆಲಂಗಾಣ ಮುಖ್ಯಮಂತ್ರಿಗಳ ಮನ ಒಲಿಸುವ ಪ್ರಯತ್ನ ರಾಜ್ಯ ಸರ್ಕಾರ ಮಾಡಲಿದ್ದು ಅದಕ್ಕಾಗಿ ಅಗತ್ಯವಿದ್ದಲ್ಲಿ ನಿಯೋಗವೊಂದನ್ನು ಕಳುಹಿಸುವುದಾಗಿ ಮುಖ್ಯಮಂತ್ರಿಗಳು ನುಡಿದರು.ತಾವಿಂದು ಕನಕಗಿರಿ ವಿಧಾನಸಭಾ ಕ್ಷೇತ್ರದ 400 ಕೋಟಿ ರೂ. ಮಿಕ್ಕಿದ ಕಾಮಗಾರಿಗಳಿಗೆ ಚಾಲನೆ ನೀಡಿದ್ದು ಅದರಲ್ಲಿ 141 ಕೋಟಿ ರೂ.ವೆಚ್ಚದಲ್ಲಿ 7 ಪ್ರಮುಖ ಕೆರೆಗಳನ್ನು ತುಂಬಿಸುವ ಯೋಜನೆ ರೈತರಿಗೆ, ಜನರಿಗೆ ಹೆಚ್ಚು ಉಪಯೋಗವಾಗಲಿದೆ. ತಮ್ಮ ಸರ್ಕಾರ ರೈತರ ಮಳೆಯಾಶ್ರಿತ ತೊಂದರೆ ತಪ್ಪಿಸಲು ರಾಜ್ಯದ ಸಮಗ್ರ ನೀರಾವರಿ ಯೋಜನೆಗೆ ಹಾಗು ಕೃಷಿ ಭಾಗ್ಯದಡಿ ಕೃಷಿಹೊಂಡಗಳ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ಮಾರ್ಚ ಅಂತ್ಯದೊಳಗೆ ಇನ್ನು 7 ಸಾವಿರ ಕೋಟಿ ನೀರಾವರಿಗೆ ವಿನಿಯೋಗಿಸಿ ಒಟ್ಟಾರೆ 52 ಸಾವಿರ ಕೋಟಿ ರೂ. ವಿನಿಯೋಗಿಸುವ ಗುರಿ ತಲುಪಲಿದೆ. ತಾವು ರೈತರ  ಸಹಕಾರಿ ಸಾಲ ಮನ್ನಾ ಮಾಡಿದ ಕುರಿತಂತೆ ರಾಜ್ಯ ಸರ್ಕಾರದಿಂದ ಸುಮಾರು 4400 ಕೋಟಿ ರೂ.ಗಳನ್ನು ಅಪೆಕ್ಸ ಬ್ಯಾಂಕಿಗೆ ಒದಗಿಸಿದ್ದು ಇದರಿಂದ ರೈತರಿಗೆ ಸಾಲ ಪಡೆಯಲು ಅನುಕೂಲವಾಗಲಿದೆ. ತಮ್ಮ ಸರ್ಕಾರ ಪಾರದರ್ಶಕ ಮತ್ತು ಹಗರಣ ಮುಕ್ತ ಆಡಳಿತ ನೀಡಿದ್ದು ಅಭಿವೃದ್ಧಿಯಲ್ಲಿ ಸರ್ವರಿಗೂ ಸಮಬಾಳು, ಸಮಪಾಲು ಹಾಗೂ ಸಮಾನ ಅವಕಾಶ ನೀಡಿ ಎಲ್ಲ ವರ್ಗದವರು ಶಾಂತಿ ಸಮಾಧಾನದಿಂದ ಜೀವನ ನಡೆಸಲು ಪ್ರಯತ್ನಸುತ್ತಿದೆ. ತಾವು ಕಳೆದ ಬಾರಿ ನೀಡಿದ್ದ ಎಲ್ಲ 165 ಭರವಸೆಗಳನ್ನು ನೆರವೇರಿಸಿದ್ದು ಈಗ ನವಕರ್ನಾಟಕದ ನಿರ್ಮಾಣದ ಮೂಲಕ ರಾಜ್ಯವು ಇಡೀ ದೇಶಕ್ಕೆ ಮಾದರಿಯಾಗಿಸುವ ಆಶಯ ಹೊಂದಿದ್ದು ಜನ ಮತ್ತೆ ತಮಗೆ ಜನಾಶಿರ್ವಾದ ನೀಡಬೇಕೆಂದು ಮುಖ್ಯಮಂತ್ರಿಗಳು ಮನವಿ ಮಾಡಿದರು.

ಕೊಪ್ಪಳ ಜಿಲ್ಲಾ ಉಸ್ತುವಾರಿ ಮತ್ತು ಉನ್ನತ ಶಿಕ್ಷಣ ಮಂತ್ರಿಗಳಾದ ಬಸವರಾಜ ರಾಯರಡ್ಡಿ ಅವರು ಮಾತನಾಡಿ ಮುಖುಮಂತ್ರಿಗಳ ನೇತೃತ್ವದ ರಾಜ್ಯ ಸರ್ಕಾರ ಸಾಮಾಜಿಕ ನ್ಯಾಯದ ಮೂಲಕ, ಸರ್ವರಿಗೂ ಅವಕಾಶ, ಎಲ್ಲ ವರ್ಗಗಳನ್ನೊಳಗೊಂಡ ಅಭಿವೃದ್ಧಿಗಾಗಿ ಶ್ರಮಿಸುತ್ತಿದೆ. ಅಣ್ಣ ಬಸವಣ್ಣನ ಆಶಯ ಸರ್ಕಾರದ ಯೋಜನೆಗಳಿಗೆ ಪ್ರೇರಣೆಯಾಗಿದೆ. ಹಸಿವು ಮುಕ್ತ ಕರ್ನಾಟಕವಾಗಿಸಿದ ರಾಜ್ಯವನ್ನು ಹೊಸ ಮುನ್ನೋಟದ ನವಕರ್ನಾಟಕ ನಿರ್ಮಾಣಕ್ಕೆ ಎಲ್ಲರು ಮುಖ್ಯಮಂತ್ರಿಗಳಿಗೆ ಬೆಂಬಲ ನೀಡಬೇಕು ಎಂದರು. ಬರುವ ಜನೇವರಿಯೊಳಗೆ ಅಡುಗೆ ಅನಿಲ ರಹಿತ ಎಲ್ಲ ಅರ್ಹ ಬಿಪಿಎಲ್.ಕುಟುಂಬಗಳಿಗೆ ಮುಖ್ಯಮಂತ್ರಿಗಳ ಅನಿಲ ಭಾಗ್ಯ ಯೋಜನೆಯಡಿ ಉಚಿತ ಅಡುಗೆ

ಅನಿಲ ಸಂಪರ್ಕ ಸೌಲಭ್ಯ ಒದಗಿಸಲಾಗುವುದು. ಜಿಲ್ಲೆಯಲ್ಲಿ 290 ಕೋಟಿ ವೆಚ್ಚದಲ್ಲಿ ಪ್ರಮುಖ ಕೆರೆಗಳನ್ನು ನದೀ ನೀರಿನಿಂದ ತುಂಬಿಸಲಾಗುತ್ತಿದೆ ಎಂದು ಬಸವರಾಜ ರಾಯರಡ್ಡಿ ನುಡಿದರು.

ಕನಕಗಿರಿ ಶಾಸಕ ಶಿವರಾಜ ಎಸ್. ತಂಗಡಗಿ ಸಮಾರಂಭದ ಅಧ್ಯಕ್ಷತೆ ವಹಿಸಿ ಪ್ರಸ್ತಾವಿಕವಾಗಿ ಮಾತನಾಡಿ ಇಂದು ಮುಖ್ಯ ಮಂತ್ರಿಗಳು ನದಿನೀರು ತುಂಬಿದ ಲಕ್ಷ್ಮೀದೇವಿ ಕೆರೆಗೆ ಬಾಗೀನ ಅರ್ಪಿಸಿ 185.96 ಕೋಟಿ ರೂ.ವೆಚ್ಚದ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ 187.15 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಂಡವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಿದ್ದಾರೆ. ಈ ಭಾಗದ ರೈತರ ನೀರಾವರಿ ಸೌಲಭ್ಯಕ್ಕಾಗಿ ಕೃಷ್ಣಾ ನದಿ ಮೂರನೇ ಹಂತದ ಯೋಜನೆಯಡಿ ಏತನೀರಾವರಿ ಯೋಜನೆ ಜಾರಿಗೊಳಿಸಲು ಆಗ್ರಹಿಸಿದರು.

ಕೊಪ್ಪಳ ಜಿಲ್ಲಾಧಿಕಾರಿ ಶ್ರೀಮತಿ ಎಂ ಕನಗವಲ್ಲಿ ಸರ್ವರನ್ನು ಸ್ವಾಗತಿಸಿದರು.

ಶಾಸಕರುಗಳಾದ ಇಕ್ಬಾಲ್ ಅನ್ಸಾರಿ, ದೊಡ್ಡನಗೌಡ ಪಾಟೀಲ್, ಕೆ. ರಾಘವೇಂದ್ರ ಹಿಟ್ನಾಳ್, ಹಂಪನಗೌಡಾ ಬಾದರ್ಲಿ, ವಿಧಾನಪರಿಷತ್ ಸದಸ್ಯರುಗಳಾದ ಬಸವರಾಜ ಪಾಟೀಲ ಇಟಗಿ, ಕೊಪ್ಪಳ ಜಿ.ಪಂ ಉಪಾಧ್ಯಕ್ಷೆ ಲಕ್ಷಮ್ಮ ಸಿದ್ದಪ್ಪ ನೀರಲೂಟಿ, ಗಂಗಾವತಿ ತಾ.ಪಂ ಅಧ್ಯಕ್ಷ ವಿರುಪಾಕ್ಷಗೌಡ ಮಾಲಿಪಾಟೀಲ್, ಕಾರಟಗಿ ಪುರಸಭೆ ಅಧ್ಯಕ್ಷೆ ಮಹಾದೇವಿ ಲಕ್ಷ್ಮಣ ಭಜಂತ್ರಿ, ಕನಕಗಿರಿ ಪಟ್ಟಣ ಪಂಚಾಯತ್ ಅಧ್ಯಕ್ಷ ರವಿ ಭಜಂತ್ರಿ, ಕಾರಟಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷ ಶಶಿಧರಗೌಡ ಪಾಟೀಲ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಉಮಾ ಮಹದೇವನ್, ಕೊಪ್ಪಳ ಸಿಇಓ ವೆಂಕಟ್ ರಾಜಾ ಜಿಲ್ಲಾ ಪೋಲಿಸವರಿಷ್ಠಾಧಿಕಾರಿ ಡಾ. ಅನೂಪ ಶೆಟ್ಟಿ, ಅಪರ ಜಿಲ್ಲಾಧಿಕಾರಿ ಡಾ. ರುದ್ರೇಶ ಘಾಳಿ. ಜನಪ್ರತಿನಿಧಿಗಳು,ಗಣ್ಯರು, ಹಾಗೂ ಅಪಾರ ಸಂಖ್ಯೆಯಲ್ಲಿ ಸಾರ್ವಜನಿಕರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

-------------------------